**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 856/2018**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ 5**

**ದಿನಾಂಕಃ** 01.07.2026 **ಸಿಡಬ್ಲ್ಯೂ 23**

| | |
|---|---|
| ಹೆಸರು | ಗುರುರಾಜ ಎನ್. ಮೈಲಾರ |
| ತಂದೆಯ ಹೆಸರು | ನಾಗರಾಜ |
| ವಯಸ್ಸು | 42 ವರ್ಷ |
| ಉದ್ಯೋಗ | ಪೋಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಬೆಳಗಾವಿ |
| ವಾಸ ಸ್ಥಳ | ಬೆಳಗಾವಿ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ದಿಃ19.03.2018 ರಿಂದ ದಿಃ19.06.2018 ರವರೆಗೆ ಹರಿಹರ ಗ್ರಾಮಾಂತರ ಪೋಲೀಸ್ ಠಾಣೆಯಲ್ಲಿ ಪಿಎಸ್ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 24.05.2018 ರಂದು ಚಾಸಾ.1 ರವರ ಹೇಳಿಕೆಯನ್ನು ಎಸ್ ಎಸ್ ಆಸ್ಪತ್ರೆ ದಾವಣಗೆರೆಯಲ್ಲಿ ಬೆಳಗ್ಗೆ 5.30 ರಿಂದ 6.45 ರವರೆಗೆ ಚಾಸಾ.20 ರವರ ಸಮಕ್ಷಮದಲ್ಲಿ ಪಡೆದುಕೊಂಡು, ಪೋಲೀಸ್ ಠಾಣೆಗೆ ವಾಪಸಾಗಿ ಬೆಳಗ್ಗೆ 7.10 ಕ್ಕೆ ಠಾಣಾ ಗುನ್ನೆ ಸಂ.89/2018 ದಾಖಲಿಸಿ ಮಾನ್ಯ ನ್ಯಾಯಾಲಯ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಂತರ ಮೃತ ಸಂತೋಷಿ ಇವರ ಶವ ಪಂಚನಾಮೆಯನ್ನು ಸರ್ಕಾರಿ ಆಸ್ಪತ್ರೆ, ಹರಿಹರ ಚಾಸಾ.4, 5 ರವರ ಸಮಕ್ಷಮದಲ್ಲಿ ಮಾಡಿರುತ್ತೇನೆ. ತನಿಖಾ ಕಾಲಕ್ಕೆ ಚಾಸಾ.6, 7 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಪಂಚನಾಮೆ ಕಾಲಕ್ಕೆ ಪೋಟೋ ತೆಗೆದಿರುತ್ತೇನೆ. ಮುಂದಿನ ತನಿಖೆಯನ್ನು ಚಾಸಾ.24 ರವರಿಗೆ ವಹಿಸಿಕೊಟ್ಟಿರುತ್ತೇನೆ. ನಿಪಿ.8 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.8 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ.9 ಎಂದು, ಸಾಕ್ಷಿಯ ಸಹಿಯನ್ನು ನಿಪಿ.9 ಎ ಎಂದು ಗುರುತಿಸಲಾಯಿತು. ನಿಪಿ.7 ರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಹಿಯನ್ನು ನಿಪಿ.7 ಸಿ ಎಂದು ಗುರುತಿಸಲಾಯಿತು. ಪಂಚನಾಮೆ ಕಾಲಕ್ಕೆ ತೆಗೆದ ಪೋಟೋವನ್ನು ನಿಪಿ.10 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಆರೋಪಿತರ ಶ್ರೀ ಜಿ ಕೆ ಡಿ ವಕೀಲರಿಂದಃ

ನಾನು ಕೃತ್ಯ ನಡೆದ ಸ್ಥಳಕ್ಕೆ ಬೇಟಿ ನೀಡಿರುವುದಿಲ್ಲ. ನಿಂತ ಲಾರಿಗೆ ಕಾರ್ ಚಾಲಕನು ಬಂದು ಡಿಕ್ಕಿ ಪಡಿಸಿದ್ದರಿಂದ ಅಪಘಾತವಾಗಿರುತ್ತದೆ ಎಂದರೆ ಸಾಕ್ಷಿಯು ಮುಂದಿನ ತನಿಖೆಯನ್ನು ಚಾಸಾ.24 ರವರು ಮಾಡಿರುತ್ತಾರೆ ಎಂದು ಉತ್ತರಿಸುತ್ತಾರೆ. ಅಪಘಾತದಲ್ಲಿ ಮೃತಪಟ್ಟ ಸಂಬಂಧಿಕರಿಗೆ ಅನುಕೂಲವಾಗಲಿ ಎಂದು ನಾನು ಲಾರಿ ಚಾಲಕನ ವಿರುದ್ಧ ಸುಳ್ಳು ದೂರನ್ನು ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ.